**ಕರ್ನಾಟಕ ಸರ್ಕಾರ**

# ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01.

**ಸಂಖ್ಯೆ:ಎಡಿಎಂ.2[1]:ಶೈ.ವ.ನಿ:02:2021-22** **ದಿನಾಂಕ:08-04-2022**

**: ಸುತ್ತೋಲೆ:**

**ವಿಷಯ:** ರಾಜ್ಯದಲ್ಲಿನ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಸಂವಿಧಾನ ಶಿಲ್ಪಿ ಡಾ॥ ಬಿ.ಆರ್.ಅಂಬೇಡ್ಕರ್‌ರವರ ಜಯಂತಿಯನ್ನು ಆಚರಿಸುವ ಕುರಿತು.

**ಉಲ್ಲೇಖ:** ಈ ಕಛೇರಿಯ ಇದೇ ಸಮ ಸಂಖ್ಯೆಯ ಜ್ಞಾಪನ ಪತ್ರ ದಿನಾಂಕ:23.02.2022.

# # # # #

ರಾಜ್ಯದಲ್ಲಿ 2021-22 ನೇ ಶೈಕ್ಷಣಿಕ ವರ್ಷ ದಿನಾಂಕ: 09.04.2022 ರಂದು ಮುಕ್ತಾಯವಾಗುತ್ತದೆ. ದಿನಾಂಕ: 14.04.2022 ರಂದು ಸಂವಿಧಾನ ಶಿಲ್ಪಿ ಡಾ॥ಬಿ.ಆರ್.ಅಂಬೇಡ್ಕರ್‌ರವರ ಜಯಂತಿಯನ್ನು ರಾಜ್ಯದ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಆಚರಿಸಲು ಉಲ್ಲೇಖಿತ ಜ್ಞಾಪನದಲ್ಲಿ ಈಗಾಗಲೇ ತಿಳಿಸಲಾಗಿದೆ.

ಮುಂದುವರೆದು, ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಮುಖ್ಯ ಶಿಕ್ಷಕರು, ಸಹ ಶಿಕ್ಷಕರು, ಎಸ್.ಡಿ.ಎಂ.ಸಿ ಅಧ್ಯಕ್ಷರು ಮತ್ತು ಸದಸ್ಯರು ಹಾಗೂ ವಿದ್ಯಾರ್ಥಿಗಳ ಸಹಭಾಗಿತ್ವದಲ್ಲಿ ಕೋವಿಡ್-19 ರ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ದಿನಾಂಕ: 14.04.2022 ರಂದು ಸಂವಿಧಾನ ಶಿಲ್ಪಿ ಡಾ॥ ಬಿ.ಆರ್. ಅಂಬೇಡ್ಕರ್‌ರವರ ಜಯಂತಿಯನ್ನು ನಿಯಮಾನುಸಾರ ಪ್ರತಿ ವರ್ಷದಂತೆ ಆಚರಿಸಲು ರಾಜ್ಯದ ಎಲ್ಲಾ ಶಾಲಾ ಮುಖ್ಯಸ್ಥರಿಗೆ, ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ, ಉಪನಿರ್ದೇಶಕರು(ಆಡಳಿತ) ಹಾಗೂ ಉಪನಿರ್ದೇಶಕರು(ಅಭಿವೃದ್ಧಿ) ಇವರುಗಳಿಗೆ ಈ ಮೂಲಕ ತಿಳಿಸಿದೆ.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ.

**ಇವರಿಗೆ:**

*01.* ರಾಜ್ಯದ ಎಲ್ಲಾ ಉಪನಿರ್ದೇಶಕರು [ಆಡಳಿತ] ಮತ್ತು ಉಪನಿರ್ದೇಶಕರು [ಅಭಿವೃದ್ಧಿ], ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಕಳುಹಿಸುತ್ತಾ, ಮೇಲ್ಕಂಡಂತೆ ಕ್ರಮವಹಿಸಲು ತಿಳಿಸಿದೆ.

*02.* ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಆಯಾ ಉಪನಿರ್ದೇಶಕರು [ಆಡಳಿತ] ಇವರ ಮೂಲಕ ಮುಂದಿನ ಕ್ರಮಕ್ಕಾಗಿ.

*03.* ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮುಖ್ಯ ಶಿಕ್ಷಕರಿಗೆ ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ಮುಂದಿನ ಕ್ರಮಕ್ಕಾಗಿ.

*04.* ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ, ಆಯುಕ್ತರ ಕಛೇರಿ, ಸಾ.ಇ.ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ಇಲಾಖಾ ಅಂತರ್ಜಾಲ ತಾಣದಲ್ಲಿ ಅಳವಡಿಸಲು ತಿಳಿಸಿದೆ.

**ಪ್ರತಿಯನ್ನು ಮಾಹಿತಿಗಾಗಿ:**

*01.* ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಗೌರವಪೂರ್ವಕವಾಗಿ ಸಲ್ಲಿಸುತ್ತಾ, ಮಾನ್ಯ ಸಚಿವರ ಆದ್ಯ ಗಮನಕ್ಕೆ ತರಲು ಕೋರಲಾಗಿದೆ.

02. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು, ಇವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
03. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, 18 ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು.
04. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು, ಇವರಿಗೆ
05. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ.
06. ಆಯುಕ್ತರು ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
07. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
08. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ.
09. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕಕರುಗಳಿಗೆ.
10. ಸಹನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು.
11. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ನೋಡಲ್ ಅಧಿಕಾರಿಗಳಿಗೆ.
12. ಕಛೇರಿ ಪ್ರತಿ.